ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೬

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೈದನೆಯ ಅಧಿವೇಶನ**

**ಸೋಮವಾರ, ದಿನಾಂಕ: ೩೦ನೇ ಜೂನ್, ೨೦೧೪**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ರಸ್ತೆ ಸಾರಿಗೆ ಪ್ರಾಧಿಕಾರದ ಸಭೆಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೬ (೩೪೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ನಡೆದ ರಸ್ತೆ ಸಾರಿಗೆ ಪ್ರಾಧಿಕಾರದ (R.T.A.) ಸಭೆಗಳೆಷ್ಟು ; ವರ್ಷವಾರು, ತಿಂಗಳು, ದಿನಾಂಕವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ನಡೆದ ರಸ್ತೆ ಸಾರಿಗೆ ಪ್ರಾಧಿಕಾರ (R.T.A.) ಸಭೆಗಳಲ್ಲಿ ಮಂಜೂರಾತಿಯಾದ, ತಡೆಹಿಡಿಯಲಾದ ಮತ್ತು ರದ್ದು ಮಾಡಲಾದ

ಪರವಾನಿಗೆಗಳೆಷ್ಟು ; ಇವುಗಳಲ್ಲಿ ಖಾಸಗಿ ಪರವಾನಿಗೆಗಳೆಷ್ಟು ; ಸರ್ಕಾರಿ ಪರವಾನಿಗೆಗಳೆಷ್ಟು ; ಮತ್ತು ಯಾವುವು ? (ಜಿಲ್ಲಾವಾರು ಖಾಸಗಿ ಮತ್ತು ಸರ್ಕಾರಿ ಪ್ರತ್ಯೇಕ ವಿವರ ನೀಡುವುದು)

## ಅಂಕಿತ ಅಧಿಕಾರಿಗಳ ಸೇವೆಯನ್ನು ಹಿಂಪಡೆಯುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೭ (೩೪೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯನ್ವಯ ನೇಮಕಗೊಂಡಿರುವ ಅಂಕಿತಾಧಿಕಾರಿಗಳ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರುಗಳ ಸೇವೆಯನ್ನು ಸರ್ಕಾರ ಹಿಂಪಡೆಯಲಾಗುವುದೇ ;

(ಆ) ಹಾಗಿದ್ದಲ್ಲಿ, ಯಾವಾಗ ಹಿಂಪಡೆಯಲಾಗುವುದು ; (ವಿವರ ನೀಡುವುದು)

(ಇ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

ಈ) ಸಾರ್ವಜನಿಕ ಆರೋಗ್ಯ ಸಂಸ್ಥೆಯಿಂದ ಆಹಾರ ಸುರಕ್ಷತಾ ವಿಭಾಗವನ್ನು ಬೇರೆ ಇಲಾಖೆಗೆ ಹಸ್ತಾಂತರಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ ;

ಉ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ? (ಪೂರ್ಣ ವಿವರ ನೀಡುವುದು)

## ವಿವಿಧ ವರ್ಗಗಳ ಆಸ್ಪತ್ರೆಯಲ್ಲಿನ ರಕ್ತನಿಧಿ ಕೇಂದ್ರಗಳು

**ಶ್ರೀಮತಿ ಭಾರತಿ ಶೆಟ್ಟಿ (ವಿಧಾನಸಭೆಯಿಂದ ಚುನಾಯಿತರಾದವರು) –**

೭೮ (೩೧೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ವಿವಿಧ ವರ್ಗಗಳ ಸರ್ಕಾರಿ ಆಸ್ಪತ್ರೆಗಳು ಎಷ್ಟಿವೆ ; ಅವು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ಕಾರದ ಎಲ್ಲಾ ಆಸ್ಪತ್ರೆಗಳಲ್ಲಿ ರಕ್ತ ನಿಧಿ ಕೇಂದ್ರಗಳು ಇವೆಯೇ ; ರಕ್ತನಿಧಿ ಇಲ್ಲದೇ ಇರುವ ಆಸ್ಪತ್ರೆಗಳೆಷ್ಟು ;

(ಇ) ಸರ್ಕಾರದ ಎಲ್ಲಾ ಆಸ್ಪತ್ರೆಗಳಲ್ಲಿ ರಕ್ತ ನಿಧಿ ಕೇಂದ್ರಗಳನ್ನು ಸ್ಥಾಪಿಸಲು ಕಳೆದ ಮೂರು ವರ್ಷಗಳಿಂದ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ವೆಚ್ಚ ಮಾಡಿರುವ ಹಣ ಎಷ್ಟು ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೯ (೩೯೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು ; ತಾಲ್ಲೂಕು ಮಟ್ಟದ ಆಸ್ಪತ್ರೆಗಳೆಷ್ಟು ; ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ಕಳೆದ ೨ ವರ್ಷಗಳಿಂದ ಈ ಭಾಗದ ಜಿಲ್ಲೆಗಳಲ್ಲಿನ ಎಷ್ಟು ಆಸ್ಪತ್ರೆಗಳಲ್ಲಿ ಕುಟುಂಬ ಯೋಜನೆ ಶಸ್ತ್ರ ಚಿಕಿತ್ಸೆ ಮಾಡಲಾಗುತ್ತಿದೆ ? (ಆಸ್ಪತ್ರೆವಾರು ಮಾಹಿತಿ ನೀಡುವುದು)

## ಭಾಷಾ ಅಲ್ಪಸಂಖ್ಯಾತ ಮತ್ತು ಧಾರ್ಮಿಕ ಅಲ್ಪಸಂಖ್ಯಾತ ವೈದ್ಯಕೀಯ ಶಿಕ್ಷಣ ಸಂಸ್ಥೆಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೮೦ (೩೧೬) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಘನ ಸರ್ವೋಚ್ಚ ನ್ಯಾಯಾಲಯದ ತೀರ್ಮಾನದಂತೆ, ಭಾಷಾ ಅಲ್ಪಸಂಖ್ಯಾತ ಮತ್ತು ಧಾರ್ಮಿಕ ಅಲ್ಪಸಂಖ್ಯಾತ ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಅನುಸರಿಸಬೇಕಾದ ವಿದ್ಯಾರ್ಥಿಗಳ ಪ್ರವೇಶಾತಿ ನಿಯಮಗಳೇನು ; (ವಿವರ ನೀಡುವುದು)

(ಆ) ಬಹುತೇಕ ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ಈ ನಿಯಮಗಳನ್ನು ಉಲ್ಲಂಘಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವರ ಮೇಲೆ ಕೈಗೊಂಡಿರುವ ಕ್ರಮಗಳೇನು ;

(ಇ) ತಾವು ಯಾವ ಗುಂಪಿನ ಭಾಷಾ ಅಲ್ಪಸಂಖ್ಯಾತ ಮತ್ತು ಧರ್ಮ ಅಲ್ಪಸಂಖ್ಯಾತರೆಂದು ಗುರುತಿಸಿಕೊಂಡು ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸುವ ಆಡಳಿತ ಮಂಡಳಿಗಳು ತಮ್ಮ ಭಾಷಾ ಮತ್ತು ಧಾರ್ಮಿಕ ಸಮುದಾಯಗಳಿಗೆ ನೀಡಬೇಕಾದ ಕನಿಷ್ಠ ಮತ್ತು ಗರಿಷ್ಠ ಪ್ರವೇಶಾತಿಗೆ ಸಂಬಂಧಪಟ್ಟಂತೆ ಯಾವ ನಿರ್ದಿಷ್ಟ ವಿಷಯವನ್ನು ರಾಜ್ಯ ಪಾಲಿಸುತ್ತದೆ ?

## ಎಂ.ಜಿ. ರಸ್ತೆಯಲ್ಲಿರುವ ಪದವೀಧರರ ಹಾಗೂ ಪಿಹೆಚ್.ಡಿ. ವಿದ್ಯಾರ್ಥಿನಿಲಯ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)** --

೮೧ (೩೧೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರಿನ ಎಂ.ಜಿ. ರಸ್ತೆಯಲ್ಲಿರುವ ಪದವೀಧರರ ಹಾಗೂ ಪಿಹೆಚ್.ಡಿ. ವಿದ್ಯಾರ್ಥಿ ನಿಲಯವನ್ನು ಯಾವಾಗ ಪ್ರಾರಂಭಿಸಲಾಯಿತು ;

(ಆ) ಸ್ವಂತ ಕಟ್ಟಡವನ್ನು ಯಾವಾಗ ಕಟ್ಟಲಾಯಿತು ;

(ಇ) ಈಗ ಈ ಕಟ್ಟಡದ ದುಸ್ಥಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಟ್ಟಡದ ದುರಸ್ಥಿ ಕೆಲಸ ಶೀಘ್ರಗತಿಯಲ್ಲಿ ನಡೆಯುತ್ತಿಲ್ಲ ಏಕೆ ?

## ಖಾಸಗಿ ಆಸ್ಪತ್ರೆಗಳ ದುಬಾರಿ ಚಿಕಿತ್ಸಾ ವೆಚ್ಚ

**ಶ್ರೀಮತಿ ತಾರಾ ಅನುರಾಧ (ನಾಮನಿರ್ದೇಶನ ಹೊಂದಿದವರು) –**

೮೨ (೩೯೭) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೦೭ರ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮದ ಪ್ರಕಾರ ಸರ್ಕಾರದಲ್ಲಿ ನೊಂದಣಿಯಾಗಿರುವ ಮತ್ತು ನೊಂದಣಿಯಾಗದಿರುವ ಖಾಸಗಿ ಆಸ್ಪತ್ರೆ/ವೈದ್ಯಕೀಯ ಸಂಸ್ಥೆಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕಾಯಿದೆ ಪ್ರಕಾರ ಚಿಕಿತ್ಸಾ ವೆಚ್ಚಗಳ ದರಪಟ್ಟಿಯನ್ನು ಆಸ್ಪತ್ರೆಗಳ ನಾಮಫಲಕಗಳಲ್ಲಿ ಪ್ರಕಟಿಸಿರುವ ಮತ್ತು ಪ್ರಕಟಿಸಿಲ್ಲದಿರುವ ಆಸ್ಪತ್ರೆ/ವೈದ್ಯಕೀಯ ಸಂಸ್ಥೆಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಕಾಯಿದೆ ಉಲ್ಲಂಘನೆ ಮಾಡಿರುವ ಎಷ್ಟು ಖಾಸಗಿ ಆಸ್ಪತ್ರೆ/ವೈದ್ಯಕೀಯ ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗಿದೆ ; (ಪೂರ್ಣ ವಿವರಗಳನ್ನು ನೀಡುವುದು)

ಈ) ಖಾಸಗಿ ಆಸ್ಪತ್ರೆ/ವೈದ್ಯಕೀಯ ಸಂಸ್ಥೆಗಳು ರೋಗಿಗಳಿಗೆ ವಿಧಿಸುತ್ತಿರುವ ದುಬಾರಿ ಚಿಕಿತ್ಸಾ ವೆಚ್ಚಗಳನ್ನು ನಿಯಂತ್ರಿಸಲು ಸರ್ಕಾರ ಯಾವುದಾದರೂ ಮಾರ್ಗಗಳನ್ನು ಅನುಸರಿಸುವುದೇ ?

## ಖಾಲಿ ಇರುವ ವೈದ್ಯರ ಹುದ್ದೆಗಳು

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೮೩ (೩೨೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮಾಗಡಿ, ನೆಲಮಂಗಲ, ದೇವನಹಳ್ಳಿ, ರಾಮನಗರ, ಚನ್ನಪಟ್ಟಣ, ಕನಕಪುರ ಹಾಗೂ ಇತರೆ ಎಲ್ಲಾ ತಾಲ್ಲೂಕುಗಳಲ್ಲಿ ಸರ್ಕಾರಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಾಲ್ಲೂಕುವಾರು ವಿವರ ನೀಡುವುದು ;

(ಆ) ಸಾರ್ವಜನಿಕರು ಸರಿಯಾದ ಚಿಕಿತ್ಸೆ ದೊರಕದೆ ಕಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಬಂದಿದ್ದಲ್ಲಿ, ವಿವರ ನೀಡುವುದು)

(ಇ) ಡೆಂಗ್ಯೂಜ್ವರ ಹಾವಳಿಯಿಂದ ಗ್ರಾಮಾಂತರ ಪ್ರದೇಶದ ಜನರು ತೊಂದರೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳಾವುವು ;

ಈ) ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲಾಗುವುದೇ ? (ಕೈಗೊಂಡ ಕ್ರಮದ ವಿವರ ನೀಡುವುದು)

## ಬೈಕ್ ಆಂಬುಲೆನ್ಸ್ ಯೋಜನೆ

**ಶ್ರೀ ಸಿದ್ದರಾಜು (ವಿಧಾನಸಭೆಯಿಂದ ಚುನಾಯಿತರಾದವರು ) –**

೮೪ (೩೭೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯಕ್ಕೆ ಬರಬೇಕಾಗಿದ್ದ ಬೈಕ್ ಆಂಬುಲೆನ್ಸ್ ಯೋಜನೆ ಯಾವ ಹಂತದಲ್ಲಿದೆ ;

(ಆ) ಪ್ರಥಮ ಹಂತದಲ್ಲಿ ಒಟ್ಟು ಎಷ್ಟು ಬೈಕ್ ಆಂಬುಲೆನ್ಸ್‌ಗಳನ್ನು ತರಿಸುವ ಯೋಜನೆ ಇದೆ ;

(ಇ) ಬೈಕ್ ಆಂಬುಲೆನ್ಸ್‌ನಲ್ಲಿ ಯಾವ ಯಾವ ಸೌಲಭ್ಯಗಳಿರುತ್ತವೆ ;

ಈ) ಬೈಕ್ ಆಂಬುಲೆನ್ಸ್‌ನ್ನು ಎಷ್ಟು ದೂರದವರೆಗೆ ಸೌಲಭ್ಯ ಪಡೆದುಕೊಳ್ಳಬಹುದು ಮತ್ತು ಅದಕ್ಕೆ ಪ್ರತಿ ಕಿಲೋಮೀಟರ್‌ಗೆ ಎಷ್ಟು ದರ ನಿಗದಿಪಡಿಸಲಾಗುವುದು ?

## ವಸತಿ ಶಾಲೆಗಳು ಮತ್ತು ವಸತಿ ನಿಲಯಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೮೫ (೩೬೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ಎಲ್ಲಾ ವಸತಿ ಶಾಲೆ ಹಾಗೂ ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಸದರಿ ವಸತಿ ಶಾಲೆ ಹಾಗೂ ವಸತಿ ನಿಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆಗಳನ್ನು ಹಾಗೂ ಮಂಜೂರಾದ ಮತ್ತು ಖಾಲಿ ಇರುವ ವಿವರಗಳನ್ನು ಹುದ್ದೆವಾರು ನೀಡುವುದು ;

(ಇ) ೨೦೧೪–೧೫ನೇ ಸಾಲಿನಲ್ಲಿ ಎಲ್ಲಾ ವಸತಿ ಶಾಲೆಗಳಿಗೆ ವೇತನ, ನಿರ್ವಹಣೆ ವೆಚ್ಚ ಮತ್ತು ವಿದ್ಯುತ್ ಬಿಲ್ ಪಾವತಿ ಕುರಿತು ಅನುದಾನ ಮಂಜೂರು ಮಾಡಲಾಗಿದೆಯೇ ;

ಈ) ಮಾಡಿದ್ದಲ್ಲಿ, ತಾಲ್ಲೂಕುವಾರು ವಿವರಗಳನ್ನು ನೀಡುವುದು ; ಇಲ್ಲವಾದಲ್ಲಿ, ವಿಳಂಬಕ್ಕೆ ಕಾರಣಗಳೇನು ?

## ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೮೬ (೩೯೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಹಿಂದುಳಿದ ವರ್ಗಗಳ ಹಾಗೂ ಸಮಾಜ ಕಲ್ಯಾಣ ವಿದ್ಯಾರ್ಥಿ ನಿಲಯಗಳಿವೆ ; ಅವುಗಳಲ್ಲಿ ವಿದ್ಯಾರ್ಥಿ ನಿಲಯಗಳೆಷ್ಟು ಹಾಗೂ ವಿದ್ಯಾರ್ಥಿನಿ ನಿಲಯಗಳೆಷ್ಟು ;

(ಆ) ರಾಜ್ಯದಲ್ಲಿನ ಎಲ್ಲಾ ಬಿ.ಸಿ.ಎಂ. ವಿದ್ಯಾರ್ಥಿನಿಲಯಗಳಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಗಂಡು ಮಕ್ಕಳು ಹಾಗೂ ಹೆಣ್ಣು ಮಕ್ಕಳ ವಿವರ ನೀಡುವುದು ;

(ಇ) ಮಾನ್ಯ ಸಚಿವರು ತಮ್ಮ ಒಂದು ವರ್ಷದ ಅಧಿಕಾರಾವಧಿಯಲ್ಲಿ ಎಷ್ಟು ವಿದ್ಯಾರ್ಥಿನಿಲಯಗಳಿಗೆ ಭೇಟಿ ನೀಡಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

ಈ) ಈ ವಿದ್ಯಾರ್ಥಿಗಳಿಗೆ ನೀಡಿರುವ ಸವಲತ್ತುಗಳ ಹಾಗೂ ವಿದ್ಯಾರ್ಥಿನಿಲಯಕ್ಕೆ ಯಾವ ಮಾರ್ಗಸೂಚಿಯ ಅನ್ವಯದಂತೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು ? (ವಿವರ ನೀಡುವುದು)

## ಐ.ಟಿ. ಪಾರ್ಕ್ ಸ್ಥಾಪನೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೮೭ (೨೪೬) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಐ.ಟಿ. ಪಾರ್ಕ್ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಇದ್ದಲ್ಲಿ, ಯೋಜನೆ ಯಾವ ಹಂತದಲ್ಲಿದೆ ; ಅದಕ್ಕಾಗಿ ಇಲಾಖೆ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಹೊಸ ಬಸ್ಸುಗಳ ಖರೀದಿ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೮೮ (೩೭೨) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಐದು ವರ್ಷಗಳಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಎಲ್ಲಾ ನಿಗಮಗಳಿಂದ ಎಷ್ಟು ಹೊಸ ಬಸ್ಸುಗಳನ್ನು ಖರೀದಿಸಲಾಗಿದೆ ;

(ಆ) ಖರೀದಿಸಲ್ಪಟ್ಟ ಬಸ್ಸುಗಳು ಯಾವ ಯಾವ ಕಂಪನಿಗೆ ಸೇರಿದ್ದು ; ಈ ಬಸ್ಸುಗಳನ್ನು ಎಷ್ಟು ಬೆಲೆಗೆ ಖರೀದಿಸಲಾಗಿದೆ ; (ವರ್ಷವಾರು ವಿವರ ನೀಡುವುದು)

(ಇ) ಕಳೆದ ಐದು ವರ್ಷಗಳಲ್ಲಿ ಸಂಸ್ಥೆಯ ಇತರೆ ನಿಗಮಗಳಿಂದ ಸರ್ಕಾರಕ್ಕೆ ಬಂದಿರುವ ಆದಾಯದ ಮೊತ್ತವೆಷ್ಟು ; (ವರ್ಷವಾರು, ನಿಗಮಗಳವಾರು ಮಾಹಿತಿ ನೀಡುವುದು)

ಈ) ಈ ಎಲ್ಲ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ? (ಮಾಹಿತಿ ನೀಡುವುದು)

## ಹಸಿರು ವಲಯ ಮಾಹಿತಿ ತಂತ್ರಜ್ಞಾನ ಬಂಡವಾಳ ಹೂಡಿಕೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ )** (**ನಾಮನಿರ್ದೇಶನ ಹೊಂದಿದವರು**) –

೮೯ (**೩೫೫**) ಯೋಜನೆ ಮತ್ತು ಸಾಂಖ್ಯಿಕ, **ಮಾಹಿತಿ** ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩ರಲ್ಲಿ ಮೊದಲ ಹಸಿರುವಲಯ ಮಾಹಿತಿ ತಂತ್ರಜ್ಞಾನ ಬಂಡವಾಳ ಹೂಡಿಕೆ ಪ್ರದೇಶವನ್ನು ಪ್ರಾರಂಭ ಮಾಡಿರುವ ಜಿಲ್ಲೆ/ತಾಲ್ಲೂಕು ಯಾವುವು ;

(ಆ) ಎಷ್ಟು ಪ್ರದೇಶಗಳಲ್ಲಿ ಈ ಯೋಜನೆ ಪ್ರಾರಂಭವಾಗಿದೆ ;

(ಇ) ರಾಜ್ಯದ ಎಷ್ಟು ಜನ ನಿರುದ್ಯೋಗಿಗಳಿಗೆ ನೌಕರಿ ದೊರಕುವುದು ;

ಈ) ಈ ಯೋಜನೆಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ಪಾಲೆಷ್ಟು ;

ಉ) ಈ ಯೋಜನೆಗೆ ಸಂಬಂಧಪಟ್ಟಂತೆ ಪೂರ್ಣ ಮಾಹಿತಿ ನೀಡುವುದು ?

## ಹಾವೇರಿ ಜಿಲ್ಲೆಯಲ್ಲಿರುವ ವಿದ್ಯಾರ್ಥಿ ನಿಲಯಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೯೦ (೩೮೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ಜಿಲ್ಲೆಯಲ್ಲಿರುವ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅದರಲ್ಲಿ ಸರ್ಕಾರಿ ಹಾಗೂ ಖಾಸಗಿ ವಿದ್ಯಾರ್ಥಿನಿಲಯಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಸ್ವಂತ ಕಟ್ಟಡ ಇರುವ ಹಾಗೂ ಬಾಡಿಗೆ ಕಟ್ಟಡ ಹೊಂದಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

ಈ) ಸಮಾಜ ಕಲ್ಯಾಣ ಇಲಾಖೆವತಿಯಿಂದ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಇಲಾಖೆಯಿಂದ ಯಾವ ಯಾವ ಯೋಜನೆಗಳ ಅಡಿಯಲ್ಲಿ ವಿದ್ಯಾರ್ಥಿಗಳು ಸದುಪಯೋಗ ಪಡೆಯುತ್ತಿದ್ದಾರೆ ; ಇದರಲ್ಲಿ ೨೦೧೨ರಿಂದ ಇಲ್ಲಿಯವರೆಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದಿಂದ ಪ್ರತಿ ವಿದ್ಯಾರ್ಥಿನಿಲಯಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ?

**ವಿ. ಶ್ರೀಶ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 255, ಪ್ರತಿಗಳು 1000 – ಪಿ2